# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ತರಬೇತಿ ಸಂಸ್ಥೆಗಳು ಮತ್ತು ತರಬೇತಿ ಕೇಂದ್ರಗಳ ನೋಂದಣಿ ಮತ್ತು ಮಾನ್ಯತೆ ಕುರಿತು ಪರಿಷ್ಕೃತ ಮಾರ್ಗಸೂಚಿಗಳ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಸುತ್ತೋಲೆ ಸಂಖ್ಯೆ: ಕೌಉಜೀಇ 51 ಕೌಗುಇ 2017 ದಿನಾಂಕ: 24-10-2017.

2. ದಿನಾಂಕ: 08.02.2018ರಂದು ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ 13ನೇ ಅಧಿಕಾರಯುಕ್ತ ಸಮಿತಿಯ ನಡವಳಿಗಳು.

---

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ 1ರಲ್ಲಿ ತರಬೇತಿ ಸಂಸ್ಥೆಗಳು ಮತ್ತು ತರಬೇತಿ ಕೇಂದ್ರಗಳ ನೋಂದಣಿ ಮತ್ತು ಮಾನ್ಯತೆ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ಉಲ್ಲೇಖ 2ರಲ್ಲಿನ 13ನೇ ಅಧಿಕಾರಯುಕ್ತ ಸಮಿತಿಯ ಸಭೆಯ ನಡವಳಿಯ ಕಂಡಿಕೆ 3 ಮತ್ತು 4ರಲ್ಲಿ ನಿರ್ಣಯಿಸಿದಂತೆ ವೃತ್ತಿ ತರಬೇತಿ ಸಂಸ್ಥೆಗಳು ಮತ್ತು ತರಬೇತಿ ಕೇಂದ್ರಗಳ ನೋಂದಣಿ ಮತ್ತು ಮಾನ್ಯತೆ ಹಾಗೂ ಅಧಿಕಾರಯುಕ್ತ ಸಮಿತಿಯಿಂದ ಅನುಮೋದಿತ ಪ್ರಸ್ತಾವನೆಗಳನ್ನು ಸರಳೀಕೃತಗೊಳಿಸಿ ವ್ಯಾಪಕವಾದ ಮಾರ್ಪಾಡಿಸಿದ ಮಾರ್ಗಸೂಚಿಗಳನ್ನು ಹೊರಡಿಸಬೇಕಾಗಿದೆ. ಇದಲ್ಲದೆ, ಇದರ ತತ್ಪರಿಣಾಮ software ಹಾಗೂ kaushalkar.com ವೆಬ್ ಪೋರ್ಟಲ್‌ನಲ್ಲಿ ಸೂಕ್ತ ಬದಲಾವಣೆಗಳನ್ನು ತರಬೇಕಾಗಿದೆ. **ಅದರಂತೆ ಈ ಆದೇಶ**

**ಸರ್ಕಾರಿ ಆದೇಶ ಸಂಖ್ಯೆ:ಕೌಉಜೀಇ 51 ಕೌಗುಇ 2017, ಬೆಂಗಳೂರು ದಿನಾಂಕ: 26-02-2018**

ಸರ್ಕಾರಿ ಸುತ್ತೋಲೆ ಸಂಖ್ಯೆ: ಕೌಉಜೀಇ 51 ಕೌಗುಇ 2017, ದಿನಾಂಕ: 24-10-2017ರಲ್ಲಿನ ಮಾರ್ಗಸೂಚಿಗಳನ್ನು ಹಿಂಪಡೆದು ಪರಿಷ್ಕೃತ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸಲು ಈ ಸರ್ಕಾರಿ ಆದೇಶದ **ಅನುಬಂಧ-1 ಮತ್ತು 2** ರಲ್ಲಿ ಲಗತ್ತಿಸಿ ಆದೇಶಿಸಿದೆ. ಪರಿಷ್ಕೃತ ಮಾರ್ಗಸೂಚಿಗಳನ್ನು ಪಾಲಿಸಿ ಮುಖ್ಯ ಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು ಈ ತಕ್ಷಣದಿಂದ ಅನುಷ್ಠಾನಗೊಳಿಸಲು ಈ ಮೂಲಕ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಈರಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

**ಇವರಿಗೆ,**

1. ಮಹಾಲೇಖಪಾಲಕರು, (ಎ&ಇ, ಜಿಎಸ್‌ಎಸ್‌ಎ, ಇ&ಆರ್‌ಎಸ್‌ಎ) ಕರ್ನಾಟಕ, ಬೆಂಗಳೂರು.

2. ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಬೆಂಗಳೂರು-29.
3. ಮಿಷನ್ ನಿರ್ದೇಶಕರು, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್, ಬೆಂಗಳೂರು.
4. ನಿರ್ದೇಶಕರು, ಕೌಶಲ್ಯ ಮಿಷನ್ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ. ಚಿಕ್ಕ ಗೋಪುರ, ಬೆಂಗಳೂರು.
6. ನಿರ್ದೇಶಕರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಬೆಂಗಳೂರು-29.
7. ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ರಾಜಾಜಿನಗರ, ಬೆಂಗಳೂರು.
8. ನಿರ್ದೇಶಕರು, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಧಾರವಾಡ.
9. ಮುಖ್ಯ ಕಾರ್ಯಾಚರಣ ಅಧಿಕಾರಿ, ಸಂಜೀವಿನಿ- ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್, ಬೆಂಗಳೂರು.
10. ಮುಖ್ಯ ಯೋಜನಾಧಿಕಾರಿಗಳು. ಡೇ-ನಲ್ಮ್, ಪೌರಾಡಳಿತ ನಿರ್ದೇಶನಾಲಯ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು.
11. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯಿತಿಗಳು.
13. ಯೋಜನಾ ನಿರ್ದೇಶಕರು, ಡಿಆರ್‌ಡಿಎ, ಎಲ್ಲಾ ಜಿಲ್ಲಾ ಪಂಚಾಯಿತಿಗಳು.
14. ಉಪ ವಿಭಾಗಾಧಿಕಾರಿಗಳು, ಎಲ್ಲಾ ಜಿಲ್ಲೆಗಳು.
15. ಕಾರ್ಯನಿರ್ವಾಹಕಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಕೌಶಲ್ಯ ಅಧಿಕಾರಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
3. ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು.
4. ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.